ಮಧುಮೇಹ ಖಾಯಿಲೆಯನ್ನು ತಡೆಗಟ್ಟುವಲ್ಲಿ ವೈದ್ಯಾಧಿಕಾರಿಗಳ ಪಾತ್ರ ಬಹು ಮುಖ್ಯ: ಡಾ.ಲಿಂಗರಾಜು.ಟಿ

ಕೊಪ್ಪಳ, ನವೆಂಬರ್ : ಮಧುಮೇಹ ಖಾಯಿಲೆಯ ನಯಂತ್ರಣ ಮತ್ತು ತಡೆಗಟ್ಟುವಲ್ಲಿ ವೈದ್ಯಾಧಿಕಾರಿಗಳ ಹಾಗೂ ಸಮುದಾಯ ಆರೋಗ್ಯ ಅಧಿಕಾರಿಗಳ ಪಾತ್ರ ಬಹು ಮುಖ್ಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಲಿಂಗರಾಜು.ಟಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ ಹಾಗೂ ಎನ್.ಸಿ.ಡಿ. ಕೋಶ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಪಂಚಾಯತ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಶುಕ್ರವಾರದಂದು ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ವಿಶ್ವ ಮಧುಮೇಹ ದಿನಾಚರಣೆಯ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ವರ್ಷ ನವೆಂಬರ್ 14 ರಂದು ವಿಶ್ವ ಮಧುಮೇಹ ದಿನಾಚರಣೆ ಕಾರ್ಯಕ್ರಮವನ್ನು ಆಚರಿಸಲಾಗುತ್ತದೆ ಇದರ ಉದ್ದೇಶ ಮಧುಮೇಹ ಖಾಯಿಲೆ ಬಗ್ಗೆ ಸಾರ್ವಜನಕರಿಗೆ ಅರಿವು ಮೂಡಿಸಿ ಚಿಕಿತ್ಸೆ ನೀಡುವುದಾಗಿದೆ. ಜೀವನಶೈಲಿಯಿಂದ ಬರುವ ರೋಗಗಳಲ್ಲಿ ಮಧುಮೇಹ ಕೂಡ ಒಂದಾಗಿದ್ದು, ಜೀವನಶೈಲಿಯನ್ನು ಬದಲಾವಣೆ ಮಾಡಿ ಪೌಷ್ಠಿಕ ಆಹಾರ ಸೇವನೆ, ದೈಹಿಕ ಚಟುವಟಿಕೆಯಿಂದ ಇರುವುದು. 30 ವರ್ಷ ಮೇಲ್ಪಟ್ಟ ಎಲ್ಲಾ ಸಾರ್ವಜನಕರಿಗೆ ಪ್ರತಿ ವರ್ಷಕ್ಕೆ ಒಂದು ಬಾರಿ ರಕ್ತ ಪರೀಕ್ಷೆ ಮಾಡಿಸುವಂತೆ ಅರಿವು ಮೂಡಿಸುವುದು ಹಾಗೂ ಪತ್ತೆಯಾದ ಮಧುಮೇಹ ರೋಗಿಗಳಿಗೆ ಚಿಕಿತ್ಸೆ ನೀಡುವುದು ಎಲ್ಲಾ ವೈದ್ಯಾಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ನಂದಕುಮಾರ್ ಹೆಚ್. ಪ್ರಸ್ತಾವಿಕವಾಗಿ ಮಾತನಾಡಿ ಮಧುಮೇಹ ಖಾಯಿಲೆ ಕುರಿತು ಮಧುಮೇಹ ಮತ್ತು ಯೋಗಕ್ಷೇಮ ಎಂಬ ಘೋಷ ವಾಕ್ಯದೊಂದಿಗೆ ಈ ವರ್ಷ ಕಾರ್ಯಕ್ರಮವನ್ನು ಆಚರಿಸಲಾಗುತ್ತಿದೆ. ಜಿಲ್ಲೆಯ ಎಲ್ಲಾ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಹಾಗೂ ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ ಕಾರ್ಯಕ್ರಮದ ಅಂಗವಾಗಿ ಜಾಗೃತಿ ಕಾರ್ಯಕ್ರಮ ಮತ್ತು ತಪಾಸಣಾ ಶಿಬಿರ ಹಮ್ಮಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಮಧುಮೇಹಿಗಳು ಸರಿಯಾಗಿ ಚಿಕಿತ್ಸೆ ಪಡೆಯುವುದರ ಮೂಲಕ ಖಾಯಿಲೆಯನ್ನು ದೂರವಿಡಬಹುದು. ಜೀವನ ಶೈಲಿ ರೋಗಗಳು ಇಂದಿನ ವೈದ್ಯಲೋಕಕ್ಕೆ ಸವಾಲಾಗಿವೆ ಮನುಷ್ಯ ಆಧುನಕನಾದಂತೆ ಆತನ ಮಾನಸಿಕ ಹಾಗೂ ದೈಹಿಕ ಸ್ವಾಸ್ಥ್ಯಕ್ಕೆ ಹೆಚ್ಚಿನ ತೊಂದರೆಗಳು ಕಾಣಿಸಿಕೊಂಡು ಆಹಾರ ಕ್ರಮದಲ್ಲಿನ ಬದಲಾವಣೆ, ದೈಹಿಕ ಚಟುವಟಿಕೆ ಇಲ್ಲದ ಜೀವನ ಹಾಗೆ ಮಾನಸಿಕ ಒತ್ತಡದಿಂದಾಗಿ ಅನೇಕ ರೋಗಗಳು ಶಾರೀರಿಕ ಹಾಗೂ ಮಾನಸಿಕವಾಗಿ ದಾಳಿ ಮಾಡುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿ ಡಾ.ರವೀಂದ್ರನಾಥ ಎಮ್.ಹೆಚ್, ಜಿಲ್ಲಾ ಕ್ಷಯರೋಗ ನರ್ಮೂಲನಾ ಅಧಿಕಾರಿ ಡಾ.ಶಶಿಧರ, ಜಿಲ್ಲಾ ಕುಷ್ಠರೋಗ ನರ್ಮೂಲನಾ ಅಧಿಕಾರಿ ಡಾ.ಪ್ರಕಾಶ ಹೆಚ್., ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಯಂತ್ರಣಾಧಿಕಾರಿ ಡಾ. ವೆಂಕಟೇಶ, ಕೊಪ್ಪಳ ವೈದ್ಯಕೀಯ ಮಹಾವಿದ್ಯಾಲಯದ ಮೆಡಿಸಿನ್ ಪ್ರೋಫೆಸರ್ ಡಾ.ಶಿವಕುಮಾರ ಸೇರಿದಂತೆ ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು, ವೈದ್ಯಾಧಿಕಾರಿಗಳು, ಸಮುದಾಯ ಆರೋಗ್ಯ ಅಧಿಕಾರಿಗಳು, ಇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಜಿಲ್ಲಾ ಕಾರಗೃಹದಲ್ಲಿ ಜಾಗೃತಿ ಕಾರ್ಯಕ್ರಮ: ನವೆಂಬರ್ 14 ರಂದು ಜಿಲ್ಲಾ ಕಾರಗೃಹದಲ್ಲಿ ವಿಶ್ವ ಮಧುಮೇಹ ದಿನಾಚರಣೆಯ ಅಂಗವಾಗಿ ಜಾಗೃತಿ ಕಾರ್ಯಕ್ರಮ ಮತ್ತು ಆರೋಗ್ಯ ಶಿಬಿರವನ್ನು ನಡೆಸಿ ನ್ಯೂನತೆಯುಳ್ಳವರಿಗೆ ಚಿಕಿತ್ಸೆ ನೀಡಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಪರ್ವತಗೌಡ ದಂತ ವೈದ್ಯಾಧಿಕಾರಿ ಡಾ.ಮಾರುತಿ, ಜಿಲ್ಲಾ ಎನ್.ಸಿ.ಡಿ. ಕಾರ್ಯಕ್ರಮ ಸಂಯೋಜಕಿ ಡಾ.ಜಯಶ್ರೀ ಕಮತೆ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ, ಜಿಲ್ಲಾ ಕಾರಾಗೃಹದ ಅಧೀಕ್ಷಕ ಶ್ರೀ ರಾಮು ಸೇರಿದಂತೆ ಇತರ ಸಿಬ್ಬಂದಿಗಳು ಭಾಗವಹಿಸಿದ್ದರು.

ಬಳ್ಳಾರಿಯಲ್ಲಿ ಬಾಲಕಾರ್ಮಿಕ ಪದ್ದತಿ ನಿರ್ಮೂಲನೆ ಕುರಿತು ಜನಜಾಗೃತಿ ಜಾಥ ಹಾಗೂ ಅಂತರಾಷ್ಟ್ರೀಯ ದತ್ತು ಮಾಸಾಚರಣೆ

ಬಳ್ಳಾರಿ,ನ.-:ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನೆ ಇವರ ಸಹಯೋಗದಲ್ಲಿ ಶನಿವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಬಾಲಕಾರ್ಮಿಕ ಪದ್ದತಿ ನರ್ಮೂಲನೆ ಕುರಿತು ಜನಜಾಗೃತಿ ಜಾಥ ಹಾಗೂ ಬೀದಿ ನಾಟಕದ ಜಾಗೃತಿ ಕಾರ್ಯಕ್ರಮ ಹಾಗೂ ಅಂತರಾಷ್ಟ್ರೀಯ ದತ್ತು ಮಾಸಾಚರಣೆ ನವೆಂಬರ್-2024ರ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ, ಮತ್ತು ಅಪರ ಜಿಲ್ಲಾಧಿಕಾರಿ ಮಹಮ್ಮದ್.ಎನ್ ಝುಬೇರ್ ಅವರು ಹಸಿರು ನಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಇದೇ ವೇಳೆ ಅಪರ ಜಿಲ್ಲಾಧಿಕಾರಿ ಅವರು ವೇಳೆ ಅಂತರಾಷ್ಟ್ರೀಯ ದತ್ತು ಮಾಸಾಚರಣೆ ನವೆಂಬರ್-2024ರ ಅಂಗವಾಗಿ ಕಾನೂನು ಬದ್ಧ ದತ್ತು ಕುರಿತ ಸಂಕಲ್ಪ ಸಂದೇಶದ ಪ್ರತಿಜ್ಞಾವಿಧಿ ಬೋಧಿಸಿದರು.

ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿ ಅಳಿಸಿ-ಮಕ್ಕಳನ್ನು ಶಾಲೆಗೆ ಕಳುಹಿಸಿ. ಬನ್ನಿ, ಬಾಲ ಕಾರ್ಮಿಕರನ್ನು ದುಡಿತದಿಂದ ಬಿಡಿಸೋಣ. ಬನ್ನಿ ಮಕ್ಕಳ ಬಾಲ್ಯವನ್ನು ರಕ್ಷಿಸಿ, ಬೆಳೆಸಲು ಸದ್ಧರಾಗೋಣ ಎನ್ನುವ ಫಲಕವುಳ್ಳ ಬ್ಯಾನರ್ ಮೂಲಕ ಜನ ಜಾಗೃತಿ ಸಂಚಾರಿ ವಾಹನ ಕಾರ್ಯಕ್ರಮ-2024ಗೆ ವಿದ್ಯುಕ್ತ ಚಾಲನೆ ನೀಡಿದರು.

ಜಾನಪದ ಕಲಾ ತಂಡವು ಜಾಗೃತಿ ಗೀತೆಗಳ ಮೂಲಕ ಬಾಲ ಕಾರ್ಮಿಕ ಪದ್ಧತಿ ಮತ್ತು ಕಿಶೋರ ಕಾರ್ಮಿಕ ಪದ್ಧತಿಗಳ ಕುರಿತು ಸಾರ್ವಜನಕರಲ್ಲಿ ಅರಿವು ಮೂಡಿಸಿದ್ದು ಜಾಥಾದ ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷಿ ?ಮೇ ಮೈದೂರ್, ಕಾರ್ಮಿಕ ಅಧಿಕಾರಿ ಸಿದ್ದಪ್ಪ ಶೈನೂರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ, ಕಾರ್ಮಿಕ ನರೀಕ್ಷಕರಾದ ರಮೇಶ್, ಪರಶುರಾಮ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನರ್ದೇಶಕ ಎ.ವೌನೇಶ್ ಹಾಗೂ ಇತರರು ಉಪಸ್ಥಿತರಿದ್ದರು.

ಅರ್ಜಿ ಆಹ್ವಾನ

ಬೆಳಗಾವಿ ನ.- ಪ್ರಸಕ್ತ ಸಾಲಿನಲ್ಲಿ ಇಂದಿರಾಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಹಾಗೂ ಅವಲಂಬಿತ ಯುವಕ ಮತ್ತು ಯುವತಿಯರಿಗೆ ಗ್ರಾಫಿಕ್ ಡಿಸೈನಿಂಗ್ ಮತ್ತು ವಿಡಿಯೋ ಎಡಿಟಿಂಗ್, ಸೋಪ್ಟ್ ವೇರ್, ಎಕ್ಸ್ಟಾರಾಕುರಿಕಲರ್ ಆಕ್ಟಿವ್ ವಿಟಿಸ್ ಫೋರ್ ಮಲ್ಟಿ ಮೀಡಿಯಾ ಮತ್ತು ಇಲ್ಲೂಸ್ಟ್ರಾಶೇನ, ಕೋರ್ಸ್‌ಗಳ ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ನ. 25 ರೊಳಗಾಗಿ ಸುವರ್ಣ ವಿಧಾನಸೌಧ ಹಲಗಾ ಜಿಲ್ಲಾ ಅಧಿಕಾರಿಗಳ ಕಚೇರಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ ಇವರಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ. 08312471191 ಸಂಖ್ಯೆಗೆ ಸಂಪರ್ಕಿಸಲು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಅಭಿವೃದ್ಧಿ ನಿಗಮ (ನಿ) ಜಿಲ್ಲಾ ಅಧಿಕಾರಿಗಳು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದು ದಿನದ ವೇತನ ಸಹಿತ ರಜೆ ನೀಡಲು ಆದೇಶ

ಬೆಳಗಾವಿ ನ.-:ಮಹಾರಾಷ್ಟ್ರ ರಾಜ್ಯದ ವಿಧಾನಸಭೆಗೆ ಸಾರ್ವತ್ರಿಕ ಚುನಾವಣೆಯು ಘೋಷಣೆಯಾಗಿದ್ದು. ನ.20 ದಂದು ಮತದಾನ ನಡೆಯಲಿದೆ.ಮಹಾರಾಷ್ಟ್ರ ರಾಜ್ಯವು ಕರ್ನಾಟಕ ರಾಜ್ಯದ ನೆರೆ ರಾಜ್ಯವಾಗಿರುವುದರಿಂದ ಮಹಾರಾಷ್ಟ್ರ ರಾಜ್ಯದಲ್ಲಿ ಮತದಾರರಾಗಿ ರುವವರು ಕರ್ನಾಟಕ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಾಧ್ಯತೆ ಇರುತ್ತದೆ.

ಆದ್ದರಿಂದ ರಾಜ್ಯದ ಗಡಿಭಾಗದ ಜಿಲ್ಲೆಗಳಾದ ಬೀದರ್, ವಿಜಯಪುರ, ಬೆಳಗಾವಿ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿನ ಎಲ್ಲಾ ರಾಜ್ಯ ಸರ್ಕಾರಿ ಕಛೇರಿಗಳು, ಶಾಲಾ ಕಾಲೇಜುಗಳು, ರಾಷ್ಟ್ರೀಕೃತ ಬ್ಯಾಂಕುಗಳು, ಜೀವವಿಮಾ ನಿಗಮ, ಹಣಕಾಸು ಸಂಸ್ಥೆಗಳು ಹಾಗೂ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ಮಹಾರಾಷ್ಟ್ರ ರಾಜ್ಯದ ಅರ್ಹ ಮತದಾರರಿಗೆ ಮಾತ್ರ ಸೀಮಿತವಾಗಿ ಮತದಾನ ಮಾಡಲು ಒಂದು ದಿನದ ವೇತನ ಸಹಿತ ರಜೆಯನ್ನು ನೀಡಲು ಆದೇಶಿಸಿದೆ.

ಮಹಾರಾಷ್ಟ್ರ ರಾಜ್ಯದ ಅರ್ಹ ಮತದಾರರಿಗೆ ಮಾತ್ರ **Negotiable Instrument Act 1881**, ಕಲಂ 25ರಡಿ ಮತ್ತು **Representation of People Act, 1951** ಕಲಂ 135 ಬಿ ರಡಿಯಲ್ಲಿನ ಎಲ್ಲಾ ಉಪಬಂದಗಗಳನ್ವಯ ಒಂದು ದಿನದ ವೇತನ ಸಹಿತ ರಜೆ ಮಂಜೂರು ಮಾಡಲು ಅಧಿಕಾರವುಳ್ಳ ಅಧಿಕಾರಿಗಳು ಷರತ್ತಿಗೊಳಪಟ್ಟು ಒಂದು ದಿನದ ವೇತನ ಸಹಿತ ರಜೆಯನ್ನು ನೀಡಲು ಆದೇಶಿಲಾಗಿದೆ ಎಂದು ಸರ್ಕಾರದ ಅಧೀನ ಕಾರ್ಯದರ್ಶಿ-1 ಪ್ರಕಟಣೆಯಲ್ಲಿ ತಿಳಿಸದ್ದಾರೆ.

ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆ

ಬೆಳಗಾವಿ ನ.-: ಬೆಂಗಳೂರಿನ ಬಾಲ ಭವನ ಸೊಸೈಟಿ ಸಹಯೋಗದೊಂದಿಗೆ 2024-25 ನೇ ಸಾಲಿನ ಜಿಲ್ಲಾ ಮಟ್ಟದ ಮಕ್ಕಳ ದಿನಾಚರಣೆಯನ್ನು ನ.19 ರಂದು ಬೆಳಗ್ಗೆ 10 ರವರೆಗೆ ನೆಹರು ನಗರದ ಮಹೇಶ್ವರಿ ಅಂಧ ಮಕ್ಕಳ ಶಾಲೆಯಲ್ಲಿ ಆಯೋಜಿಸಲಾಗಿದೆ.

ಈ ಹಿನ್ನಲೆಯಲ್ಲಿ ನೃತ್ಯ, ವಾದ್ಯ ಸಂಗೀತ, ವಿಜ್ಞಾನದಲ್ಲಿ ಸೃಜನಾತ್ಮಕ ಆವಿಷ್ಕಾರ, ಚಿತ್ರಕಲಾ ಸ್ಪರ್ದೆಗಳನ್ನು ಏರ್ಪಡಿಸಲಾಗಿದೆ. ಆಸಕ್ತರು ಮಕ್ಕಳ ಕಾರ್ಯಕ್ರಮದಲ್ಲಿ ಭಾಗವಹಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿ, ನಾಗರಮುನ್ನೋಳಿ

ಟೆಂಡರ್ ವೇಳಾಪಟ್ಟಿ

1:ಖಾಲಿ ಟೆಂಡರ್ ಅರ್ಜಿಗಳನ್ನು (ಅನುಬಂಧ-1 ಮತ್ತು ಅನುಬಂಧ-2ನ್ನು) ಇ-ಪ್ರೊಕ್ಯುರ್‌ಮೆಂಟ್ ಮೂಲಕ ಡೌನ್‌ಲೋಡ್ ಮಾಡಿಕೊಳ್ಳುವ ದಿನಾಂಕ & ಸಮಯ:18-11-2024 ರಿಂದ 01-12-2024 ರಂದು 15-30 ಗಂಟೆಯೊಳಗೆ https://kppp.karnataka.gov.in ಮೂಲಕ, 2:ಇ-ಪೊರ್ಟಲ್‌ನಲ್ಲಿ ಟೆಂಡರ್‌ನ್ನು ಇಂಧೀಕರಿಸಲು ಕೊನೆಯ ದಿನಾಂಕ: 02-12-2024 16.00ಗಂಟೆಗೆ, 3:ಇ-ಪೊರ್ಟಲ್‌ನಲ್ಲಿ ದಾಖಾಲಾತಿಗಳ/ ತಾಂತ್ರಿಕ, ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ:03-12-2024, 16.15ಗಂಟೆಗೆ, 4:ಇ-ಪೊರ್ಟಲ್‌ನಲ್ಲಿ ದಾಖಾಲಾತಿಗಳ/ ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ ಮತ್ತು ಸಮಯ:03-12-2024 16.30ಗಂಟೆಗೆ, 5:ಈ ಟೆಂಡರ್ ಗೆ ಸಂಬಂಧಿಸಿದ ಹೆಚ್ಚಿನ ವಿವರಗಳಿಗೆ ಸಂಪರ್ಕಿಸ ಬೇಕಾದ ಕಚೇರಿ ವಿವರ:ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಗ್ರಾಮ ಪಂಚಾಯಿತಿ, ನಾಗರಮುನ್ನೋಳಿ.

ಕ. ಸಂ:1:ಕಾಮಗಾರಿ ಹೆಸರು:SUPPLY OF MATERIALS FOR CONST OF CC GUTTER FROM AKBAR HONAWAD SHOP TO SIDDESHWAR COMPOUND WORK SITE IN NAGARMUNNOLI GP TQ Chikkodi DIST. Belagavi. Grant -MGNREGA 2024-25, ಟೆಂಡರಿಗಿಟ್ಟ ಮೊತ್ತ (ರೂ. ಲಕ್ಷಗಳಲ್ಲಿ):497125,ಮುಂಗಡ ಠೇವಣಿ (ರೂ.ಗಳಲ್ಲಿ):12500, ಗುತ್ತಿಗೆದಾರರ ದರ್ಜೆ:ನೋಂದಾಯಿತ ಸಾಮಗ್ರಿ ಪೂರೈಕೆದಾರರು (KG-I), ಕ.ಸಂ:2:ಕಾಮಗಾರಿ ಹೆಸರು:SUPPLY OF MATERIALS FOR CONST OF CC GUTTER FROM SIDDESHWAR COMPOUND TO HIREHALLA WORK SITE IN NAGARMUNNOLI GP TQ Chikkodi DIST. Belagavi. Grant -MGNREGA 2024-25, ಟೆಂಡರಿಗಿಟ್ಟ ಮೊತ್ತ (ರೂ. ಲಕ್ಷಗಳಲ್ಲಿ):342843, ಮುಂಗಡ ಠೇವಣಿ (ರೂ.ಗಳಲ್ಲಿ):9000, ಗುತ್ತಿಗೆದಾರರ ದರ್ಜೆ:ನೋಂದಾಯಿತ ಸಾಮಗ್ರಿ ಪೂರೈಕೆದಾರರು (KG-I)

ಸಹಿ/-ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಗ್ರಾಮ ಪಂಚಾಯಿತಿ, ನಾಗರಮುನ್ನೋಳಿ

ಪತ್ರಿಕೋದ್ಯಮ ವಿಭಾಗದಿಂದ ರಸಪ್ರಶ್ನೆ ಕಾರ್ಯಕ್ರಮ

ಕೊಪ್ಪಳ, ನವೆಂಬರ್ : ಕೊಪ್ಪಳ ವಿಶ್ವ ವಿದ್ಯಾಲಯದಲ್ಲಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ವತಿಯಿಂದ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಅಂಗವಾಗಿ ರಸ ಪ್ರಶ್ನೆ ಕಾರ್ಯಕ್ರಮವನ್ನು ಗುರು ವಾರ ಆಯೋಜನೆ ಮಾಡಲಾಯಿತು.ಪತ್ರಿಕೋದ್ಯಮ, ಸಮಾಜಶಾಸ್ತ್ರ, ವಾಣಿಜ್ಯಶಾಸ್ತ್ರ, ರಾಜ್ಯಶಾಸ್ತ್ರ, ಇಂಗ್ಲಿಷ್, ಕನ್ನಡ, ಇತಿಹಾಸ, ಅರ್ಥಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಉತ್ಸುಕರಾಗಿ ರಸಪ್ರಶ್ನೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ವಾಣಿಜ್ಯ ಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಪ್ರಥಮ ಸ್ಥಾನ, ರಾಜ್ಯಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಹಾಗೂ ಅರ್ಥಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ತೃತೀಯ ಸ್ಥಾನ ಪಡೆದುಕೊಂಡರು. ಕೊಪ್ಪಳ ವಿಶ್ವ ವಿದ್ಯಾಲಯದ ಕುಲಪತಿ ಪ್ರೊ.ಬಿ.ಕೆ.ರವಿ, ಕುಲಸಚಿವ ಪ್ರೊ.ಕೆ.ವಿ. ಪ್ರಸಾದ್, ಸ್ನಾತಕೋತ್ತರ ಕೇಂದ್ರದ ನರ್ದೇಶಕ ಪ್ರಕಾಶ್ ಯಳವಟ್ಟಿ ಅವರು ವಿದ್ಯಾರ್ಥಿಗಳನ್ನು ಅಭಿನಂ ದಿಸಿದರು.ಈ ಸಂಧರ್ಭದಲ್ಲಿ ವಿವಿಧ ವಿಭಾಗಗಳ ಉಪನ್ಯಾ ಸಕ ರಾದ ಅಯ್ಯಪ್ಪ, ಪಾರ್ವತಿ, ಸಂತೋಳಕುಮಾರ, ಶ್ರೀಕಾಂತ್, ವಿರುಪಾಕ್ಷಿ, ಪ್ರವೀಣ ಪೋಲಿಸ್ ಪಾಟೀಲ, ಸತೀಶ್, ಭಾಳಾ , ಕುಮಾರ ನಾಯಕ, ಜಗದೀಶ, ಸುಧಾಕರ, ಪಾಪಣ್ಣ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

ರಾಷ್ಟ್ರೀಯ ನವಜಾತು ಶಿಶು ಸಪ್ತಾಹ ಕಾರ್ಯಕ್ರಮ

ಕೊಪ್ಪಳ, ನವೆಂಬರ್ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಕೊಪ್ಪಳ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಕಿನ್ನಾಳ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ನವಜಾತು ಶಿಶು ಸಪ್ತಾಹ ಕಾರ್ಯಕ್ರಮವು ನವೆಂಬರ್ 15 ರಂದು ಟಣಕನಕಲ್ ಗ್ರಾಮದಲ್ಲಿ ನಡೆಯಿತು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಮಾತನಾಡಿ ಜಿಲ್ಲೆಯಲ್ಲಿ ನವೆಂಬರ್ 15 ರಿಂದ ನ.21 ರವರೆಗೆ ರಾಷ್ಟ್ರೀಯ ನವಜಾತು ಶಿಶು ಸಪ್ತಾಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಮತ್ತು ತಾಲೂಕಾ ಮಟ್ಟದ ಆಸ್ಪತ್ರೆಗಳಲ್ಲಿ ನವಜಾತ ಶಿಶುವಿನ ರಕ್ಷಣೆ ಸಿಗುವ ಸೇವಾ ಸೌಲಭ್ಯಗಳ ಕುರಿತು ಸಾರ್ವಜನಕರಿಗೆ ಮಾಹಿತಿ ನೀಡಿ, ಮಗು ಮತ್ತು ತಾಯಿಯನ್ನು ಒಂದೇ ಕೋಣೆಯಲ್ಲಿ ಇರಿಸಿ ಮತ್ತು ಮಗುವಿಗೆ ಬೇಡಿಕೆಯ ಮೇಲೆ ಆಹಾರವನ್ನು ನೀಡಲು ಅವಕಾಶ ಮಾಡಿಕೊಡಬೇ